ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ

464 (910) ಶ್ರೀ ಡೊಂಗರಗಾಂವ ಶಹಜಹಾನ್ ಇಸ್ಮಾಯಿಲ್ (ಅಥಣಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅನುಕಂಪದ ಆಧಾರದ ಮೇಲೆ ಲಿಪಿಕ ಸಿಬ್ಬಂದಿ ಎಂದು ಎಷ್ಟು ಜನರನ್ನು ನೇಮಕಾತಿ ಮಾಡಲಾಗಿದೆ;

2. ಈ ಸಿಬ್ಬಂದಿಗಳ ನೇಮಕಾತಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸೇವಾ ನಿಯಮಾವಳಿಯ ಮೇರೆಗೆ ನೇಮಿಸಲಾಗಿದೆಯೇ;

3. ರಾಜ್ಯದ ಇತರ ಇಲಾಖೆಗಳಲ್ಲಿಯ ಸಿಬ್ಬಂದಿಗಳಿಗೆ ನೀಡುವ ಸೇವಾ ಸೌಲಭ್ಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳಿಗೆ ನೀಡುತ್ತಿಲ್ಲಾ ಎಂಬ ಸಂಗತಿ ನಿಜವೆ; ಈ ಬಗ್ಗೆ ಕಾರ್ಯರೂಪ ಏನಾದರೂ ಹಮ್ಮಿಕೊಳ್ಳಲಾಗಿದೆಯೇ; ಹಮ್ಮಿಕೊಂಡಿದ್ದರೆ ಅವು ಯಾವುವು;

4. ರಾಜ್ಯದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳಿಗೆ ನೀಡುತ್ತಿರುವ ಮುಂಬಡ್ತಿ ಹಾಗೂ ಇತರ ಸೇವಾ ಸೌಲಭ್ಯಗಳನ್ನು ಈ ಲಿಪಿಕ ಸಿಬ್ಬಂದಿಗಳಿಗೆ ಯಾಕೆ ನೀಡುತ್ತಿಲ್ಲಾ; ನೀಡುವ ಕುರಿತು ಏನಾದರೂ ನಿಯಮಗಳನ್ನು ರಚಿಸಲಾಗಿದೆಯೇ;

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ 27 ಜಿಲ್ಲಾ ಪಂಚಾಯತ್‌ಗಳ ಪೈಕಿ 24 ಜಿಲ್ಲಾ ಪಂಚಾಯತ್‌ಗಳಿಂದ 75 ಜನರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅನುಕಂಪದ ಆಧಾರದ ಮೇಲೆ ಲಿಪಿಕ ಸಿಬ್ಬಂದಿ ಎಂದು ನೇಮಕಾತಿ ಮಾಡಲಾಗಿದೆ. 1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಸೆಕ್ಷನ್ 155(2) ಮತ್ತು 196(3) ರಲ್ಲಿ ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್‌ಗಳಿಗೆ ಮಂಜೂರಾದ ಹುದ್ದೆಗಳನ್ನು ಸರ್ಕಾರಿ ನೌಕರರ ನಿಯೋಜನೆಯಿಂದ ಮಾತ್ರ ಭರ್ತಿ ಮಾಡಬೇಕಾಗಿರುವುದರಿಂದ, ಈ ಅಧಿನಿಯಮ ಜಾರಿಗೆ ಬಂದ ನಂತರ ಜಿಲ್ಲಾ ಪಂಚಾಯತ್‌ಗಳಲ್ಲಿ ಅನುಕಂಪದ ಆಧಾರದ ಮೇಲೆ ಅಥವಾ ಬೇರೆಯಂತೆ ನೇಮಕಾತಿ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ. ಆದರೆ ಅರ್ಹ ಪ್ರಕರಣಗಳಲ್ಲಿ ಜಿಲ್ಲಾ ಪಂಚಾಯತ್ ಸೇವೆಯಲ್ಲಿರುತ್ತಾ, ನಿಧನರಾದ ಸಿಬ್ಬಂದಿಯ ಅವಲಂಬಿಗಳಲ್ಲಿ ಒಬ್ಬರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ವಿಷಯವನ್ನು ಸಂಬಂಧಿಸಿದ ವಿಭಾಗಾಧಿಕಾರಿಗಳ ಮೂಲಕ ಅನುಕಂಪದ ಆಧಾರದ ಮೇಲೆ ನೇಮಕಾತಿ ಒದಗಿಸಲು ವ್ಯವಸ್ಥೆ ಮಾಡಲಾಗುತ್ತಿದೆ.

2. ಈ ನೇಮಕಾತಿಯನ್ನು ಕರ್ನಾಟಕ ನಾಗರೀಕ ಸೇವಾ (ಅನುಕಂಪದ ಆಧಾರದ ಮೇಲಿನ ನೇಮಕಾತಿ) ನಿಯಮಗಳು 1996 ರನ್ವಯ ಮಾಡಲಾಗುತ್ತಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ, 1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಅಡಿಯಲ್ಲಿ ಬರುವ ಜಿಲ್ಲಾ ಪಂಚಾಯತ್ ವ್ಯವಸ್ಥೆಯಲ್ಲಿ, ಪಂಚಾಯತ್ ರಾಜ್ ಸಂಸ್ಥೆಗಳಿಗೆ ಮಂಜೂರಾದ ಹುದ್ದೆಗಳನ್ನು ಸದರಿ ಅಧಿನಿಯಮದ ಅನುಸಾರ ಭರ್ತಿ ಮಾಡಲಾಗುತ್ತಿದೆ.

3. ಪ್ರಶ್ನೆ 'ಅ' ಮತ್ತು 'ಆ' ಗೆ ನೀಡಿರುವ ಉತ್ತರದಿಂದ ಉದ್ಭವಿಸುವುದಿಲ್ಲ.

4. ಗ್ರಾಮ ಪಂಚಾಯಿತಿ ಕಾರ್ಯದರ್ಶಿ ವೃಂದವು, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ 1993ರ ವ್ಯಾಪ್ತಿಯಲ್ಲಿ ಬರುವ ಶಾಸನಬದ್ಧ ವೃಂದವಾಗಿರುತ್ತದೆ. ಹಾಗೂ ಈ ವೃಂದವು ಈಗಾಗಲೇ ಕರ್ನಾಟಕ ಸಾಮಾನ್ಯ ಸೇವೆಗಳು (ಅಭಿವೃದ್ಧ ವಿಭಾಗ ಮತ್ತು ಸ್ಥಳೀಯ ಸಂಸ್ಥೆ ಶಾಖೆ) (ನೇಮಕಾತಿ) ನಿಯಮಗಳು 1962ರ ವ್ಯಾಪ್ತಿಯಲ್ಲಿ ಇರುತ್ತದೆ. ಆದರೆ, ಪಂಚಾಯತ್ ರಾಜ್ ಸಂಸ್ಥೆಗಳಿಗೆ ಒದಗಿಸಲಾದ ಲಿಪಿಕ ಸಿಬ್ಬಂದಿಯು ಈ ನಿಯಮಗಳ ವ್ಯಾಪ್ತಿಯಲ್ಲಿ ಬರುವುದಿಲ್ಲ. ಆದ್ದರಿಂದ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ವೃಂದಕ್ಕೆ ಒದಗಿಸಲಾದ ಮುಂಬಡ್ತಿ ಸೇವಾ ಸೌಲಭ್ಯವನ್ನು ಜಿಲ್ಲಾ ಪಂಚಾಯತ್ ವ್ಯವಸ್ಥೆಯಲ್ಲಿ ಮಂಜೂರಾದ ಲಿಪಿಕ ವೃಂದಕ್ಕೆ ವಿಸ್ತರಿಸಲು ಬರುವುದಿಲ್ಲ. ಆದರೆ, 1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಅವಕಾಶಗಳ ಹಿನ್ನೆಲೆಯಲ್ಲಿ, ಜಿಲ್ಲಾ ಪಂಚಾಯತ್‌ಗಳಿಗೆ ಮಂಜೂರಾದ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿ ವೃತ್ತಿಪರ ಶಿಕ್ಷಣ

465 (961) ಶ್ರೀ ಗೋಪಾಲ ಭಂಡಾರಿ.ಹೆಚ್. (ಕಾರ್ಕಳ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ವೃತ್ತಿಪರ ಶಿಕ್ಷಣವನ್ನು ರಾಜ್ಯದಲ್ಲಿ ಯಾವ ಯಾವ ಉದ್ಯಮಗಳಿಗೆ ಅಳವಡಿಸಲಾಗುವುದು?

2. ಹೊಸ ಕೋರ್ಸುಗಳನ್ನು ಮತ್ತು ಹೊಸ ತರಗತಿಗಳನ್ನು ಪ್ರಾರಂಭಿಸುವ ಯೋಜನೆ ಸರ್ಕಾರಕ್ಕಿದೆಯೆ?

ಪ್ರೊ.ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

1. ವೃತ್ತಿಪರ ಶಿಕ್ಷಣವನ್ನು ರಾಜ್ಯದಲ್ಲಿ ಅಳವಡಿಸಲಾಗಿರುವ ಉದ್ಯಮಗಳ ಪಟ್ಟಿಯನ್ನು ಲಗತ್ತಿಸಿದೆ.

2. ಸಧ್ಯಕ್ಕೆ ಇಲ್ಲ.